ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ರಾಜ್ಯ ಸಹಕಾರಿ ಬ್ಯಾಂಕುಗಳ ಅವ್ಯವಹಾರ ಹಾಗೂ ದಿವಾಳಿ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

509 (740) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಸಹಕಾರಿ ಅಧಿನಿಯಮದಡಿ ಒಟ್ಟು ಎಷ್ಟು ಸಹಕಾರಿ ಬ್ಯಾಂಕುಗಳು ನೋಂದಾಯಿತವಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈವರೆಗೆ ನೋಂದಣಿಯಾದ ಬ್ಯಾಂಕುಗಳಲ್ಲಿ ಎಷ್ಟು ಸಹಕಾರಿ ಬ್ಯಾಂಕುಗಳು ಕಾರ್ಯನಿರ್ವಹಿಸುತ್ತಿವೆ;

(ಇ) ನೋಂದಾಯಿತ ಬ್ಯಾಂಕುಗಳಲ್ಲಿ ಎಷ್ಟು ಬ್ಯಾಂಕುಗಳು ದಿವಾಳಿಯಾಗಿವೆ ಮತ್ತು ಅವುಗಳ ಪುನಃಶ್ಚೇತನಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸಹಕಾರಿ ಬ್ಯಾಂಕುಗಳಲ್ಲಿ ಇತ್ತೀಚೆಗೆ ಅವ್ಯವಹಾರಗಳು ಹೆಚ್ಚಾಗುತ್ತಿದ್ದು, ಠೇವಣಿದಾರರು ಆತಂಕದಲ್ಲಿದ್ದು, ಅವರ ರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?